**ಓ.ಎಸ್. ನಂಃ 386/23**

**ಡಿ.ಡಬ್ಲ್ಯೂಃ 2**

**ದಿನಾಂಕ 03.07.2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ ಕೆ.ಬಿ.ಜೆ. ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ಕರೀಗೌಡ @ ಕಾರೀಗೌಡ ಬಿನ್ ಕೆಂಪೇಗೌಡರು 3 ನೇ ಪ್ರತಿವಾದಿಯ ಹೆಸರಿಗೆ ದಾವಾ ಆಸ್ತಿಯ ಸಂಬಂಧ ಬರೆದ ವೀಲುನಾಮೆಗೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಈಗ ದಿಃ 16.05.2002 ರ ನೊಂದಾಯಿತ ಮರಣ ಶಾಸನ ಪತ್ರ ತೋರಿಸಿ ಅದರಲ್ಲಿರುವ ತನ್ನ ಪೋಟೋವನ್ನು ಮತ್ತು ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ವೀಲುನಾಮೆಯನ್ನು ನಿಡಿ.31 ಎಂದು, ಸಾಕ್ಷಿಯ ಪೋಟೋವನ್ನು ನಿಡಿ.31(ಎ) ಎಂದು, ಸಾಕ್ಷಿಯ ಸಹಿಯನ್ನು ನಿಡಿ.31(ಬಿ) ಮತ್ತು 31(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಡಿ.31 ರಲ್ಲಿ ಕರೀಗೌಡ @ ಕಾರೀಗೌಡ ಬಿನ್ ಕೆಂಪೇಗೌಡರ ಪೋಟೋವನ್ನು ಮತ್ತು ಸಹಿಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಡಿ.31(ಡಿ) ಯಿಂದ 31(ಜಿ) ಎಂದು, ಕರೀಗೌಡ @ ಕಾರೀಗೌಡ ಬಿನ್ ಕೆಂಪೇಗೌಡರ ಪೋಟೋವನ್ನು ನಿಡಿ.31(ಹೆಚ್) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ**

ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**

**ಕೆ.ಆರ್.ನಗರ**